ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಮಾನ್ಯ ಸಭಾಧ್ಯಕ್ಷರು

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ ದಿನಾಂಕ : DATE : 29/09/201

# ಪಾಕಿಸ್ತಾನಕ್ಕೆ ಕಾಗೇರಿ ಟಾಂಗ್

## ಉಗಾಂಡಾದಲ್ಲಿ 64ನೇ ಸಿಪಿಎ ಸಮ್ಮೇಳನದಲ್ಲಿ ಸ್ಪೀಕರ್ ಭಾಗಿ

• **ಕನ್ನಡಪ್ರಭ ವಾರ್ತೆ** ಬೆಂಗಳೂರು 29/9/19

ಉಗಾಂಡಾ ದೇಶದ ಕಂಪಾಲದಲ್ಲಿ ಶನಿವಾರ ನಡೆದ 64ನೇ ಸಿಪಿಎ ಸಮ್ಮೇಳನದ 'ಸಾಮಾನ್ಯ ಸಭೆಯಲ್ಲಿ' ಕರ್ನಾಟಕ ವಿಧಾನಸಭಾ ಅಧ್ಯಕ್ಷರಾದ ವಿಶ್ವೇಶ್ವರ ಹೆಗಡೆ ಕಾಗೇರಿ ಸೇರಿದಂತೆ ಹಿಮಾಚಲ ಪ್ರದೇಶ ವಿಧಾನಸಭೆಯ ಸ್ಪೀಕರ್ ರಾಜೀವ್ ಬಿಂದಾಲ್, ಅಸ್ಸಾಂ ವಿಧಾನಸಭೆ ಅಧ್ಯಕ್ಷ ಹಿತೇಂದ್ರನಾಥ ಗೋಸ್ವಾಮಿ ಪಾಲ್ಗೊಂಡಿದ್ದರು.

ಸಮ್ಮೇಳನದಲ್ಲಿ ಪಾಕಿಸ್ತಾನವು ಕಾಶ್ಮೀರ ವಿಷಯವನ್ನು ಪ್ರಸ್ತಾಪಿಸಿ, ಭಾರತ ದೇಶ ಜಮ್ಮು-ಕಾಶ್ಮೀರದ ಸದಸ್ಯತ್ವವನ್ನು ಅಮಾನತಿನಲ್ಲಿಟ್ಟಿರುವ ವಿಧೇಯಕಕ್ಕೆ ಅನುಮೋದನೆ ನೀಡುವ ವಿಷಯದಲ್ಲಿ ಅನಗತ್ಯವಾಗಿ ವಿಳಂಬ ಮಾಡುತ್ತಿದೆ. ಜಮ್ಮು-ಕಾಶ್ಮೀರದಲ್ಲಿ ಸೈನಿಕ ಆಡಳಿತ ಇದೆ. ಪ್ರಜಾಪ್ರಭುತ್ವ ವ್ಯವಸ್ಥೆ ಇಲ್ಲ ಎಂದು ಆರೋಪಿಸಿತು. ಈ ಸಮಯದಲ್ಲಿ ಭಾರತದ ಪ್ರತಿನಿಧಿಯಾಗಿದ್ದ ಕರ್ನಾಟಕದ ವಿಧಾನಸಭಾ ಅಧ್ಯಕ್ಷರಾದ ವಿಶ್ವೇಶ್ವರ ಹೆಗಡೆ ಕಾಗೇರಿ, 'ಕಾಶ್ಮೀರದ ವಿಷಯ ಭಾರತದ ಆಂತರಿಕ ಸಂಗತಿ ಮತ್ತು ಭಾರತದ ಪಾರ್ಲಿಮೆಂಟ್ ನಿರ್ಣಯ ಕೈಗೊಳ್ಳಲಿದೆ' ಎಂದರು. ಇದೇ ವೇಳೆ ಮಾತನಾಡಿದ ಹಿಮಾಚಲ ಪ್ರದೇಶ ಸ್ಪೀಕರ್, ರಾಜೀವ್ ಬಿಂದಾಲ್, ಈ ಸಮ್ಮೇಳನದಲ್ಲಿ ಭಾರತದ ಆಂತರಿಕ ವಿಷಯ ಪ್ರಸ್ತಾಪಿಸಿರುವುದು ಸರಿಯಲ್ಲ ಎಂದರು.



ಉಗಾಂಡಾದ ಕಂಪಾಲದಲ್ಲಿ ನಡೆದ ಸಿಪಿಎ 64ನೇ ಸಮ್ಮೇಳನದ 'ಸಾಮಾನ್ಯ ಸಭೆಯಲ್ಲಿ' ಕರ್ನಾಟಕ ವಿಧಾನಸಭಾ ಅಧ್ಯಕ್ಷರಾದ ವಿಶ್ವೇಶ್ವರ ಹೆಗಡೆ ಕಾಗೇರಿ ಭಾಗವಹಿಸಿದ್ದರು.

1